ಕನ್ನಡಪ್ರಭ 2.6.20 P.3

# ಯಲಹಂಕದ ಪುಟ್ಟೇನಹಳ್ಳಿ ಕೆರೆ ನಿರ್ವಹಣೆ ಪಾಲಿಕೆಗೆ: ನೋಟಿಸ್

## ಕೆರೆ-ಪಕ್ಷಿ ಸಂರಕ್ಷಣಾ ಟ್ರಸ್ಟ್, ಸ್ಥಳೀಯರು ಸಲ್ಲಿಸಿದ್ದ ಸಾರ್ವಜನಿಕ ಹಿತಾಸಕ್ತಿ ಅರ್ಜಿ ವಿಚಾರಣೆ

• **ಕನ್ನಡಪ್ರಭ ವಾರ್ತೆ** ಬೆಂಗಳೂರು

ಪಕ್ಷಿ ಸಂರಕ್ಷಿತಾ ವಲಯವಾಗಿರುವ ಯಲಹಂಕದ ಪುಟ್ಟೇನಹಳ್ಳಿ ಕೆರೆ ನಿರ್ವಹಣೆಯನ್ನು ಬಿಬಿಎಂಪಿಗೆ ವಹಿಸಿ ರಾಜ್ಯ ನಗರಾಭಿವೃದ್ಧಿ ಇಲಾಖೆ ಹೊರಡಿಸಿದ್ದ ಆದೇಶ ರದ್ದುಪಡಿಸುವಂತೆ ಕೋರಿ ಸಲ್ಲಿಕೆಯಾಗಿರುವ ಅರ್ಜಿ ಸಂಬಂಧ ಸರ್ಕಾರಕ್ಕೆ ಹೈಕೋರ್ಟ್ ನೋಟಿಸ್ ಜಾರಿ ಮಾಡಿದೆ.



ಈ ಕುರಿತು ಯಲಹಂಕ ಪುಟ್ಟೇನಹಳ್ಳಿ ಕೆರೆ-ಪಕ್ಷಿ ಸಂರಕ್ಷಣಾ ಟ್ರಸ್ಟ್ ಮತ್ತು ಸ್ಥಳೀಯ ನಿವಾಸಿಗಳು ಸಲ್ಲಿಸಿದ್ದ ಸಾರ್ವಜಿಕ ಹಿತಾಸಕ್ತಿ ಅರ್ಜಿ ವಿಚಾರಣೆ ನಡೆಸಿದ ಮುಖ್ಯ ನ್ಯಾಯಮೂರ್ತಿ ಎ.ಸ್.ಓಕ ನೇತೃತ್ವದ ವಿಭಾಗೀಯ ನ್ಯಾಯಪೀಠ, ರಾಜ್ಯ ಮುಖ್ಯ ವನ್ಯಜೀವಿ ಪರಿಪಾಲಕ, ವನ್ಯಜೀವಿ ಸಂರಕ್ಷಣಾಧಿಕಾರಿ, ಬಿಬಿಎಂಪಿ ಮತ್ತು ಜಲಮಂಡಳಿಗೂ ನೋಟಿಸ್ ಜಾರಿ ಮಾಡಿದೆ.

ಅಲ್ಲದೆ, ರಾಜ್ಯ ಮುಖ್ಯ ವನ್ಯಜೀವಿ ಪರಿಪಾಲಕರೇ ಈ ಕೆರೆಯ ನಿರ್ವಹಣೆ ಮಾಡಬಹುದು ಎಂದು ನ್ಯಾಯಪೀಠ ಸೂಚನೆ ನೀಡಿ ವಿಚಾರಣೆಯನ್ನು ಜೂ.15ಕ್ಕೆ ಮುಂದೂಡಿದೆ.

ಯಲಹಂಕ ಪುಟ್ಟೇನಹಳ್ಳಿ ಕೆರೆ ಪ್ರದೇಶದಲ್ಲಿ 175ಕ್ಕೂ ಹೆಚ್ಚು ಪ್ರಭೇದದ ಪಕ್ಷಿ ಸಂಕುಲವಿದೆ. ಈ ಪ್ರದೇಶವನ್ನು ಪಕ್ಷಿ ಸಂರಕ್ಷಿತ ವಲಯವೆಂದು ಘೋಷಿಸಿ ಅರಣ್ಯ ಮತ್ತು ಪರಿಸರ ಇಲಾಖೆ ಹೆಚ್ಚುವರಿ ಮುಖ್ಯ ಕಾರ್ಯದರ್ಶಿ 2015ರ ಸೆ.10ರಂದು ಗೆಜೆಟ್ ಅಧಿಸೂಚನೆ ಹೊರಡಿಸಿದ್ದರು. ಆದರೆ, ಆ ಕೆರೆಯ ಅಭಿವೃದ್ಧಿ ಹಾಗೂ ನಿರ್ವಹಣೆಯನ್ನು ಬಿಬಿಎಂಪಿಗೆ ಹಸ್ತಾಂತರಿಸಿ 2019ರ ಡಿ.11ರಂದು ನಗರಾಭಿವೃದ್ಧಿ ಇಲಾಖೆಗೆ ಆದೇಶ ಹೊರಡಿಸಿತ್ತು. ಅದನ್ನು ಪ್ರಶ್ನಿಸಿ ಹೈಕೋರ್ಟ್‌ಗೆ ಅರ್ಜಿ ಸಲ್ಲಿಸಲಾಗಿದೆ.